# <u>ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ</u>

## <u>ಸಿ.ಸಿ. ನಂ. 318 / 2022</u>

ಸಿಡಬ್ಲ್ಯೂ- **2**
ಪಿಡಬ್ಲ್ಯೂ- **2**

<u>ದಿನಾಂಕಃ **26.03.2026.**</u>

<u>ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು</u>

| | | |
|---|---|---|
| ಸಾಕ್ಷಿಯ ಹೆಸರುಃ | - | ದೇವಿಂದ್ರಪ್ಪ |
| ತಂದೆಯ/ಗಂಡನ ಹೆಸರುಃ | - | ಭೀಮರಾಯ |
| ವಯಸ್ಸುಃ | - | **55** ವರ್ಷ |
| ಉದ್ಯೋಗಃ | - | ದಿನಗೂಲಿ ಕೆಲಸ. |
| ವಾಸಸ್ಥಳಃ | - | ಬಾಚವಾರ. |

<u>ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ</u>

ಚಾಸಾ-1 ಮತ್ತು 3 ರವರ ಪರಿಚಯ ನನಗೆ ಇರುತ್ತದೆ. ದಿನಾಂಕಃ 25.11.2021 ರಂದು ಸಂಜೆ 5 ರಿಂದ 6 ಗಂಟೆಯ ವರೇಗೆ ಚಾಸಾ-1 ರವರ ಮನೆಯಲ್ಲಿ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಗುನ್ನಾ ಸ್ಥಳದ ಪಂಚನಾಮೆಯನ್ನು ಪೊಲೀಸರು ಮಾಡಿದ್ದರು. ಅದೇ ರೀತಿ ಗುನ್ನಾ ಸ್ಥಳದಲ್ಲಿ ಪೋಟೋವನ್ನು ಸಹ ತೆಗೆದಿದ್ದರು. ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಯು ತಾನು ಸಹಿ ಮಾಡಿದ ದಾಹಲೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಗುನ್ನಾ ಸ್ಥಳದ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 4 ಎಂದು ಗುರುತಿಸಲಾಗಿರುತ್ತದೆ. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 4(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಎರಡು ಪೋಟೋಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ 2 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯು ಗುನ್ನಾ ಸ್ಥಳದ ಕಚ್ಚಾ ನಕ್ಷೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ.ಸಿ.ಎ.ಎ. ರವರಿಂದಃ

ನನ್ನನ್ನು ಪೊಲೀಸರು ಕರೆದುಕೊಂಡು ಬಂದಿದ್ದರು. ಇದಕ್ಕಿಂತ ಮುಂಚೆ ಪೊಲೀಸರು ನನಗೆ ಪರಿಚಯ ಇದ್ದರು. ಚಾಸಾ-1 ರವರ ಎರಡು ಮನೆಗಳು ಇರುತ್ತವೆ ಎಂದರೆ ಸರಿ. ಅವುಗಳ ನಂಬರ ನನಗೆ ಚಾಸಾ-1 ರವರು ಹೇಳಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಗುನ್ನಾ ಸ್ಥಳದ ಪಂಚನಾಮೆಯನ್ನು ಪೊಲೀಸರು ಬರೆದಿರುತ್ತಾರೆ. ಗುನ್ನಾ ಸ್ಥಳದಲ್ಲಿ ನಾನು ಸಹಿ ಮಾಡಿರುತ್ತೇನೆ. ನನ್ನ ಹಾಗೂ ಚಾಸಾ-1 ರವರ ಮನೆ ದೂರ ಇರುತ್ತದೆ

ಎಂದರೆ ಸರಿಯಲ್ಲ. ಗುನ್ನಾ ಸ್ಥಳದ ಪಂಚನಾಮೆಯ ಬಗ್ಗೆ ನನಗೆ ಗೊತ್ತಿರುವುದಿಲ್ಲ ಎಂದರೆ ಸರಿಯಲಲ. ಪೊಲೀಸರು ಸಹಿ ಮಾಡು ಎಂದು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಃ</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಅದೆ.**

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.